# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1067 |
| ಮಾನ್ಯ ಸದಸ್ಯರ ಹೆಸರು | ಶ್ರೀ ರಾಮೋಜಿಗೌಡ (ಪಧವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 18-12-2024 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 03 ವರ್ಷಗಳಿಂದ ರಾಜ್ಯದಲ್ಲಿ ಪೋಡಿಗಾಗಿ ಸ್ವೀಕರಿಸಿರುವ ಅರ್ಜಿ ಗಳೆಷ್ಟು; ಇದರಲ್ಲಿ ಎಷ್ಟು ಅರ್ಜಿ ಗಳನ್ನು ವಿಲೇ ಮಾಡಲಾಗಿದೆ; (ವಿವರ ನೀಡುವುದು) | ಭೂಮಾಪನ ಇಲಾಖೆಯಲ್ಲಿ ಕಳೆದ 3 ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ವಿವಿದ ರೀತಿಯ (ದರಖಾಸ್ತು, ಅಲಿನೇಷನ್, ಭೂಸ್ವಾಧೀನ, ಮ್ಯುಟೇಷನ್ ಪೋಡಿ ಇತ್ಯಾದಿ) ಪೋಡಿ ಅರ್ಜಿಗಳ ವಿವರ ಕೆಳಕಂಡಂತಿದೆ:<br><br>ಸ್ವೀಕರಿಸಿದ ಅರ್ಜಿಗಳ ಸಂಖ್ಯೆ: 6,62,825<br>ವಿಲೇಗೊಳಿಸಿದ ಅರ್ಜಿಗಳ ಸಂಖ್ಯೆ: 5,33,545<br>ಬಾಕಿ ಇರುವ ಅರ್ಜಿಗಳ ಸಂಖ್ಯೆ: 129280 |
| ಆ) | ಬಾಕಿ ಇರುವ ಅರ್ಜಿಗಳೆಷ್ಟು; ಯಾವಾಗ ವಿಲೇ ಮಾಡಲಾಗುವುದು; (ಹೋಬಳಿ ವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು) | ಈ ಕೆಳಕಂಡ ಕಾರಣಗಳಿಂದ ವಿವಿಧ ಪೋಡಿ ಅರ್ಜಿಗಳು ಬಾಕಿ ಇದ್ದು, ಪ್ರಕರಣಗಳಲ್ಲಿನ ನ್ಯೂನ್ಯತೆಗಳನ್ನು ಶೀಘ್ರವಾಗಿ ಸರಿಪಡಿಸಿಕೊಂಡು ಕಂದಾಯ ಹಾಗೂ ಭೂಮಾಪನ ಇಲಾಖೆಯ ನಡವಳಿಗಳೊಂದಿಗೆ ವಿಳಂಬವಿಲ್ಲದೇ ಪೋಡಿ ದುರಸ್ತಿ ಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>1. ಆಕಾರಬಂದ್ & ಪಹಣಿ ವಿಸ್ತೀರ್ಣದಲ್ಲಿ ವ್ಯತ್ಯಾಸಗಳಿರುವುದು;<br>2. ಪಹಣಿ ಕಾಲಂ 3 & 9 ರಲ್ಲಿ ವಿಸ್ತೀರ್ಣದ ವ್ಯತ್ಯಾಸಗಳಿರುವುದು;<br>3. ಪಹಣಿ ತಿದ್ದುಪಡಿ ಮಾಡಲು ಅವಶ್ಯಕವಾದ ಹಿಂದಿನ ಕಂದಾಯ ದಾಖಲೆಗಳು (ಮ್ಯುಟೇಷನ್, ಪಹಣಿ, ಮಂಜೂರಿ ಆದೇಶ-ಇತರೆ) ಲಭ್ಯವಿಲ್ಲದಿರುವುದು;<br>4. ಹಕ್ಕು ಮತ್ತು ಗಡಿ ಕುರಿತಂತೆ ನ್ಯಾಯಾಲಯಗಳಲ್ಲಿ ವ್ಯಾಜ್ಯಗಳಿರುವುದು ಇತ್ಯಾದಿ ಕಾರಣಗಳು.<br><br>ಬಾಕಿ ಇರುವ ಅರ್ಜಿಗಳ ಹೋಬಳಿವಾರು / ತಾಲ್ಲೂಕುವಾರು ವಿವರವನ್ನು **ಅನುಬಂಧ-1 ರಲ್ಲಿ** ಲಗತ್ತಿಸಿದೆ. |
| ಇ) | ಪೋಡಿಗಾಗಿ ಸಲ್ಲಿಕೆಯಾಗುವ ಅರ್ಜಿ ಗಳನ್ನು ಇತ್ಯರ್ಥಪಡಿಸಲು ಕಾಲಮಿತಿ ಇದೆಯೇ; ಯಾವ ಕಾಲಮಿತಿಯೊಳಗೆ ವಿಲೇ ಮಾಡದ ಎಷ್ಟು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು) | ಈ ಹಿಂದೆ, ಮ್ಯುಟೇಷನ್ ಪೋಡಿಯಂತಹ ಪ್ರಕ್ರಿಯೆಯನ್ನು ಪೂರೈಸಲು ನಾಲ್ಕರಿಂದ ಆರು ತಿಂಗಳವರೆಗೆ ಕಾಲಾವಕಾಶ ತೆಗೆದುಕೊಳ್ಳಲಾಗುತ್ತಿತ್ತು. ಆದರೆ, ಪ್ರಸ್ತುತ ಸರ್ಕಾರವು ರೈತರಿಗೆ ಸಂಬಂಧಪಟ್ಟ ಇಂತಹ ಕೆಲಸಗಳಿಗೆ ಆದ್ಯತೆ ನೀಡಿ ಎಲ್ಲಾ ಹಂತಗಳ ಪ್ರಕ್ರಿಯೆಗಳನ್ನು ಸೂಕ್ತ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಮೂಲಕ ಚುರುಕುಗೊಳಿಸಿದ್ದು, ಪೋಡಿಗೆ ಯೋಗ್ಯವಾಗಿರುವ ಯಾವುದೇ ಪ್ರಕರಣಗಳನ್ನು ಸರಾಸರಿ ಒಂದು ತಿಂಗಳ ಅವಧಿಯಲ್ಲಿ ಪೂರೈಸಲಾಗುತ್ತಿದೆ. |

| | | |
|---|---|---|
| | | ಭೂಮಂಜೂರಾತಿ ಪೋಡಿಯಂತಹ ಪ್ರಕರಣಗಳಿಗೆ ಸಹ ಆದ್ಯತೆ ನೀಡಿದ್ದು, ಹಿಂದೆ ಇಂತಹ ಪೋಡಿ ಕೆಲಸವನ್ನು ಪೂರೈಸಲು ಹೊರಡಿಸಲಾಗಿದ್ದ ಸುತ್ತೋಲೆಗಳನ್ನು ಕ್ರೂಢೀಕರಿಸಿ ಸರ್ಕಾರದ ಆದೇಶ ಸಂಖ್ಯೆ: ಕಂಇ 156 ಎಸ್‌ಎಸ್‌ಎಂ 2024, ದಿನಾಂಕ:25-11-2024ರಲ್ಲಿ ಸರಳೀಕರಣಗೊಳಿಸಲಾಗಿದೆ. ಈ ಸಂಬಂಧ ತಂತ್ರಾಂಶವನ್ನೂ ಸಹ ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುತ್ತಿದೆ.<br><br>ಪೋಡಿಗೆ ಯೋಗ್ಯವಾದ ಪ್ರಕರಣಗಳ ಬಾಬ್ತು ಅಧಿಕಾರಿ/ನೌಕರರುಗಳು ಉದ್ದೇಶ ಪೂರ್ವಕವಾಗಿ ವಿಳಂಬ ಮಾಡಿರುವ/ಮಾಡುತ್ತಿರುವ ಬಗ್ಗೆ ನಿರ್ದಿಷ್ಟ ದೂರುಗಳು ಸ್ವೀಕೃತವಾದಲ್ಲಿ ಸಂಬಂಧಿಸಿದ ಪ್ರಾದೇಶಿಕ ಭೂದಾಖಲೆಗಳ ಜಂಟಿ ನಿರ್ದೇಶಕರು/ಭೂದಾಖಲೆಗಳ ಉಪ ನಿರ್ದೇಶಕರುಗಳಿಂದ ವರದಿ ಪಡೆದು, ಇಲಾಖಾ ವಿಚಾರಣೆಯನ್ನು ನಡೆಸಿ, ತಪ್ಪಿತಸ್ಥ ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುತ್ತಿದ್ದು, ಕಳೆದ ಒಂದು ವರ್ಷದಲ್ಲಿ ಇಂತಹ ಕಾರಣಗಳಿಗೆ ಯಾವುದೇ ಅಧಿಕಾರಿ / ಸಿಬ್ಬಂದಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಿರುವುದಿಲ್ಲ. |
| ಈ) | ಪೋಡಿಗಾಗಿ ಬಾಕಿ ಇರುವ ಅರ್ಜಿ ಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು; | ಮೋಜಿಣಿ ತಂತ್ರಾಶದ ಮುಖಾಂತರ ನಿರ್ವಹಿಸಲಾಗುತ್ತಿದ್ದ ಮ್ಯುಟೇಷನ್ ಪೋಡಿ ಪ್ರಕ್ರಿಯೆಯನ್ನು ಇನ್ನೂ ಹೆಚ್ಚು ತ್ವರಿತವಾಗಿ ನಿರ್ವಹಿಸಲು ತಂತ್ರಾಂಶವನ್ನು ಕಾಲಕಾಲಕ್ಕೆ ಉನ್ನತೀಕರಿಸಲು ಪರಿಶೀಲಿಸಲಾಗುತ್ತಿದೆ.<br><br>ಬಾಕಿಯಿರುವ ದರಖಾಸ್ತು ಪೋಡಿ ಪ್ರಕರಣಗಳ ತ್ವರಿತ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳು:-<br>1. ಸರ್ಕಾರದ ಆದೇಶ ಸಂಖ್ಯೆ: ಕಂಇ 156 ಎಸ್‌ಎಸ್‌ಎಂ 2024, ದಿನಾಂಕ 25-11-2024 ರಲ್ಲಿ ದರಖಾಸ್ತು ಪೋಡಿ ದುರಸ್ತಿ ಕುರಿತು ನಮೂನೆ 1 ರಿಂದ 5 ಮತ್ತು 6 ರಿಂದ 10 ಗಳ ಭರ್ತಿ ಮತ್ತು ದೃಢೀಕರಿಸುವ ಪ್ರಕ್ರಿಯೆಯನ್ನು ಸರಳೀಕರಿಸಿ, ನಮೂನೆ 1 ರಿಂದ 5 ಗಳ ಭರ್ತಿ, ಅನುಮೋದನೆ ಮತ್ತು ಅಳತೆ ಪ್ರಕರಣಗಳ ನಿರ್ವಹಣೆಯನ್ನು ಆನ್‌ಲೈನ್‌ನಲ್ಲಿ ನಿರ್ವಹಿಸುವ ಸಲುವಾಗಿ ಭೂಮಿ ಉಸ್ತುವಾರಿ ಕೋಶದಿಂದ ತಂತ್ರಾಂಶ ಅಭಿವೃದ್ಧಿ ಪಡಿಸಲಾಗಿದೆ. ನಮೂನೆ 1 ರಿಂದ 5 ಗಳಿಗೆ ಉಪ ವಿಭಾಗಾಧಿಕಾರಿಗಳು ಮತ್ತು ಭೂದಾಖಲೆ ಗಳ ಉಪ ನಿರ್ದೇಶಕರು ಮೇಲು ಸಹಿ ಮಾಡುವುದನ್ನು ಕೈಬಿಡಲಾಗಿದ್ದು, ನಮೂನೆ 1, 3 & 4 ರ ಒಟ್ಟು ವಿಸ್ತೀರ್ಣವು ಆಕಾರ ಬಂದ್ ವಿಸ್ತೀರ್ಣಕ್ಕಿಂತ ಕಡಿಮೆ ಅಥವಾ ಸಮನಾಗಿರುವ ಪ್ರಕರಣಗಳಲ್ಲಿ ನಮೂನೆ 6 ರಿಂದ 10 ಗಳನ್ನು ಭರ್ತಿ ಮಾಡುವುದರಿಂದ ವಿನಾಯತಿ ನೀಡಿದೆ.<br>2. ಕಂದಾಯ ಇಲಾಖೆಯಿಂದ ಪಹಣಿ ತಿದ್ದುಪಡಿ ಬಗ್ಗೆ ಕಂದಾಯ ಅದಾಲತ್ ಗಳನ್ನು ನಡೆಸಲಾಗುತ್ತಿದೆ.<br>3. ಕಂದಾಯ ಇಲಾಖೆಯ ಅಭಿಲೇಖಾಲಯದ ಎಲ್ಲಾ ಮಂಜೂರಿಗೆ ಸಂಬಂಧಿಸಿದ ಕಡತಗಳನ್ನು Cataloging and Indexing ಮಾಡಲು ಸರ್ಕಾರದಿಂದ ಸೂಚಿಸಿದ್ದು, ಅದರಂತೆ ಕಂದಾಯ ಇಲಾಖೆಯಿಂದ ಕ್ರಮವಹಿಸಲಾಗಿದೆ. |

| | | |
|---|---|---|
| | | 4. ಪಹಣಿಯಲ್ಲಿನ ಮಾಲೀಕರ ಹೆಸರು/ಪೌತಿ ಖಾತೆ, ಇತ್ಯಾದಿಗಳ ಕುರಿತಂತೆ ತಿದ್ದುಪಡಿ ಮಾಡುವ ಸಂಬಂಧ ಕಂದಾಯ ಇಲಾಖೆಯಿಂದ ಕಂದಾಯ ಅದಾಲತ್‌ಗಳನ್ನು ನಡೆಸಲಾಗುತ್ತಿದೆ.<br><br>5. ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಅಗತ್ಯ ಸೂಚನೆ ನೀಡಲಾಗುತ್ತಿದೆ.<br><br>6. ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕರನ್ನು ನಿಯೋಜನೆ ಮಾಡಿ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.<br><br>7. ಸರ್ಕಾರವು ಅಗತ್ಯವಿರುವ ಒಟ್ಟು 35 ಭೂದಾಖಲೆಗಳ ಸಹಾಯಕ ನಿರ್ದೇಶಕರು ಹಾಗೂ 750 ಭೂಮಾಪಕರ ಹುದ್ದೆಗಳ ಭರ್ತಿಗೆ ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗದಿಂದ ಅಧಿಸೂಚನೆಗಳನ್ನು ಹೊರಡಿಸಲಾಗಿದೆ.<br><br>ಇದರಿಂದ ಬಾಕಿಯಿರುವ ವಿವಿಧ ಪೋಡಿ ದುರಸ್ತಿ ಪ್ರಕರಣಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ಸಾಧ್ಯವಾಗುತ್ತದೆ. |
| ಉ) | ರಾಜ್ಯದಲ್ಲಿರುವ ಪೋಡಿ ಮುಕ್ತ ಗ್ರಾಮಗಳು ಯಾವುವು? (ವಿವರ ನೀಡುವುದು) | ಬಹು ಮಾಲೀಕತ್ವದ ಖಾಸಗಿ ಒಡೆತನದ ಪಹಣಿಗಳನ್ನು ಏಕವ್ಯಕ್ತಿ ಪಹಣಿಗಳನ್ನಾಗಿ ಮಾಡುವ ಉದ್ದೇಶದಿಂದ ಪೋಡಿ ಮುಕ್ತ ಯೋಜನೆಯಡಿ ರಾಜ್ಯದಲ್ಲಿ ಈಗಾಗಲೇ 16644 ಗ್ರಾಮಗಳನ್ನು ಪೋಡಿ ಮುಕ್ತ ಗ್ರಾಮಗಳಾಗಿ ಮಾಡಿದೆ. ಗ್ರಾಮಗಳ ವಿವರಗಳನ್ನು **ಅನುಬಂಧ-2** ರಲ್ಲಿ ಲಗತ್ತಿಸಿದೆ. |

**ಸಂಖ್ಯೆ: ಕಂಇ 212 ಎಸ್‌ಎಸ್‌ಸಿ 2024**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು